**<u>ದಿನಾಂಕಃ 09.04.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.</u>**

**<u>ಪಾಟಿ ಸವಾಲುಃ ಪ್ರತಿವಾದಿ ಪರ ಶ್ರೀ.ಎನ್.ಎಂ. ವಕೀಲರಿಂದಃ</u>**

ನಾನು 8 ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿರುತ್ತೇನೆ. ನನಗೆ ಓದಲು ಮತ್ತು ಬರೆಯಲು ಬರುತ್ತದೆ. ನನ್ನ ತಂದೆಯವರು 2021 ರಲ್ಲಿ ತೀರಿಕೊಂಡಿರುತ್ತಾರೆ. ನನ್ನ ತಂದೆಯ ಜೀವಿತಾವಧಿಯಲ್ಲಿ ಹಾಗೂ ಅವರ ಮರಣಾನಂತರ 1 ನೇ ಪ್ರತಿವಾದಿಯವರು ಕುಟುಂಬದ ನಿರ್ವಹಣೆಯನ್ನು ಮಾಡುತ್ತಾ ಬಂದಿರುತ್ತಾರೆ ಅಂದರೆ ಸರಿ. 2 ನೇ ಪ್ರತಿವಾದಿ ಅಂದರೆ ನನ್ನ ತಾಯಿ ಈಗಲೂ ಸಹ 1 ನೇ ಪ್ರತಿವಾದಿಯವರೊಂದಿಗೆ ವಾಸಮಾಡುತ್ತಾ ಬಂದಿರುತ್ತಾರೆ ಅಂದರೆ ಸರಿ. ದಾವೆ ದಾಖಲಿಸುವವರೆಗೂ ನಾನು ಪ್ರತಿವಾದಿಯವರೊಂದಿಗೆ ಚೆನ್ನಾಗಿ ಇದ್ದೆ ಅಂದರೆ ಸರಿ. 1 ನೇ ಪ್ರತಿವಾದಿಯವರು ತಂದೆಯ ಸ್ಥಾನದಲ್ಲಿದ್ದುಕೊಂಡು ನಮ್ಮನ್ನು ಚೆನ್ನಾಗಿ ನೋಡಿಕೊಂಡು ಬಂದಿರುತ್ತಾರೆ ಅಂದರೆ ಸರಿ. ನ್ಯಾಯಾಲಯದಲ್ಲಿ ಸಲ್ಲಿಸಿದ ಪ್ರಮಾಣ ಪತ್ರದಲ್ಲಿ ಬರೆದಿರುವ ಸಂಗತಿಗಳು ನನಗೆ ಗೊತ್ತಿವೆ. ಸಾಕ್ಷಿಗೆ ನೊಂದಾಯಿತ ಹಕ್ಕು ಖುಲಾಸೆ ಪತ್ರವನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಭಾವಚಿತ್ರ ಮತ್ತು ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಡಿ–1 ಮತ್ತು ಸಾಕ್ಷಿಯ ಸಹಿಯನ್ನು ನಿಡಿ–1(ಎ ಯಿಂದ ಡಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುಂದುವರೆದು 1 ನೇ ಪ್ರತಿವಾದಿಯು ಸುಳ್ಳು ಹೇಳಿ ಸದರಿ ಪತ್ರವನ್ನು ಬರೆಸಿಕೊಂಡಿರುತ್ತಾರೆ ಎಂದು ಉತ್ತರಿಸುತ್ತಾರೆ. ಸೊರಬದ ಉಪನೊಂದಣಿ ಕಛೇರಿಗೆ ಸ್ವತಃ

ಬಂದಿರುತ್ತೀರಿ ಅಂದರೆ ಸರಿ. ಸಾಕ್ಷಿಯು ಮುಂದುವರೆದು ಬ್ಯಾಂಕ್ ನ ವ್ಯವಹಾರಗೋಸ್ಕರ ಸಹಿ ಮಾಡಲು ಉಪನೊಂದಣಿ ಕಛೇರಿಗೆ ಕರೆಸಿರುತ್ತಾರೆ ಎಂದು ಉತ್ತರಿಸುತ್ತಾರೆ. ನಾನು ನನ್ನ ದಾವೆಯಲ್ಲಿ ಹಕ್ಕು ಖುಲಾಸೆ ಪತ್ರವನ್ನು ಬರೆದುಕೊಟ್ಟಿರುತ್ತೇನೆ ಎಂದು ನಮೂದಿಸಿರುವುದಿಲ್ಲ ಅಂದರೆ ಸರಿ.

ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಸಾಕ್ಷಿಯ ಮುಂದುವರೆದ ಪಾಟಿ ಸವಾಲಿಗೆ ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಿ ಮುಂದೂಡಲಾಯಿತು.

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**
**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**